# ಪ್ರಕಟಣೆ

2017–18 ರ ಸರ್ಕಾರಿ ಪ್ರಾಥಮಿಕ ಶಾಲೆಗಳ ಪದವೀಧರ ಪ್ರಾಥಮಿಕ ಶಿಕ್ಷಕ (6 ರಿಂದ 8ನೇ ತರಗತಿ) ನೇಮಕಾತಿಯ ಪರೀಕ್ಷೆಗೆ 68832 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದು, ಅವರಲ್ಲಿ 55249 ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 13371 ಅಭ್ಯರ್ಥಿಗಳು ಪರೀಕ್ಷೆಗೆ ಗೈರುಹಾಜರಾಗಿರುತ್ತಾರೆ. ತಪ್ಪಾಗಿ ಮಾಹಿತಿಗಳನ್ನು ನಮೂದಿಸಿರುವ ಹಿನ್ನೆಲೆಯಲ್ಲಿ 212 ಅಭ್ಯರ್ಥಿಗಳ ಅರ್ಜಿಗಳು ತಿರಸ್ಕೃತಗೊಂಡಿವೆ.

ಪರೀಕ್ಷೆಗೆ ಹಾಜರಾಗಿರುವ 55249 ಅಭ್ಯರ್ಥಿಗಳ ಅಂಕ ವಿವರಗಳನ್ನು ಇಲಾಖಾ ವೆಬ್‌ಸೈಟ್‌ನಲ್ಲಿ (**www.schooleducation.kar.nic.in**) ಪ್ರಕಟಿಸಲಾಗಿದೆ. ಸದರಿ ವೆಬ್‌ಸೈಟ್‌ನಲ್ಲಿ ಅಭ್ಯರ್ಥಿಗಳು ತಮ್ಮ ನೋಂದಣಿ ಸಂಖ್ಯೆ (**Register No.**) ಮತ್ತು ಜನ್ಮ ದಿನಾಂಕವನ್ನು (**Date of Birth**) ನಿರ್ದಿಷ್ಟ ಸ್ಥಳದಲ್ಲಿ "ನಮೂದಿಸಿ", "ಸಲ್ಲಿಸಿ" ಎನ್ನುವ "ಬಟನ್" ಮೇಲೆ ಕ್ಲಿಕ್ ಮಾಡಿದ್ದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಪಡೆದಿರುವ ಅಂಕಗಳನ್ನು ವೀಕ್ಷಿಸಬಹುದು. ಇದರ ಬಗ್ಗೆ ಏನಾದರೂ ಆಕ್ಷೇಪಣೆ ಇದ್ದಲ್ಲಿ 7 ದಿನಗಳ ಒಳಗೆ ಆನ್‌ಲೈನ್ ಮೂಲಕ ಸಲ್ಲಿಸಬಹುದಾಗಿದೆ.

ಈ ಪ್ರಕ್ರಿಯೆ ಮುಗಿದ ನಂತರ, ಅರ್ಹ ಅಭ್ಯರ್ಥಿಗಳ 1:2 ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಬಿಡುಗಡೆ ಮಾಡಲಾಗುವುದು. ಪರಿಷ್ಕೃತ ವೇಳಾಪಟ್ಟಿಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ